ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 07-04-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | **59th Annual Maize Workshop-2016:**<br><br>**Chief Guest:**<br><br>**Dr. Trilochan Mohapatra, Secretary, (DARE) & Director, General, ICAR, New Delhi.**<br><br>**Guest of Honour:**<br><br>**Dr. J.S. Sandhu, Dy. Director General (CS) ICAR, New Delhi**<br><br>**Dr. Vinay Mahajan, Director, IIMR, New Delhi.**<br><br>**Presided by:**<br><br>**Dr. H. Shivanna, Vice Chancellor, UAS, Bengaluru.** | **10-4-2016**<br>**Sunday at 10.00 AM** | **Kuvempu Sabhangana, GKVK, Bengaluru.** |

ನಿರ್ದೇಶಕರ ಪರವಾಗಿ

ಪತ್ರಿಕಾ ಪ್ರಕಟಣೆ

# ಬಹಿರಂಗ ವಿಚಾರಣೆ

ಬೆಂಗಳೂರು, ಏಪ್ರಿಲ್ 7 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ವಿವಿಧ ಜಾತಿ ಜನಾಂಗಗಳನ್ನು ಹಿಂದುಳಿದ ವರ್ಗಗಳ ಪಟ್ಟಿಗೆ ಹೊಸದಾಗಿ ಸೇರಿಸಲು, ಪ್ರವರ್ಗ ಬದಲಾವಣೆಗೆ ಪರ್ಯಾಯ ಪದ ಸೇರ್ಪಡೆಗೆ ಮತ್ತು ಕಾಗುಣಿತ ದೋಷ ತಿದ್ದುಪಡಿಗೆ ಸಂಬಂಧಿಸಿದಂತೆ ಅಫಿಡವಿಟ್ ಮೂಲಕ ಸ್ವೀಕರಿಸಿರುವ/ಸ್ವೀಕರಿಸುವ ಮನವಿಗಳ ಬಗ್ಗೆ ಬಹಿರಂಗ ವಿಚಾರಣೆ ನಡೆಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ದಾವಣಗೆರೆ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಏಪ್ರಿಲ್ 11 ರಂದು ಬೆಳಿಗ್ಗೆ 11–00 ಗಂಟೆಗೆ. ಚಿತ್ರದುರ್ಗ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಏಪ್ರಿಲ್ 12 ರಂದು ಬೆಳಿಗ್ಗೆ 11–00 ಗಂಟೆಗೆ ಹಾಗೂ ತುಮಕೂರು ಜಿಲ್ಲೆಯ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಏಪ್ರಿಲ್ 13 ರಂದು ಬೆಳಿಗ್ಗೆ 11–00 ಗಂಟೆಗೆ ಬಹಿರಂಗ ಸಭೆಯನ್ನು ನಡೆಸಲಾಗುವುದು ಎಂದು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಪ್ರಕಟಣೆ ತಿಳಿಸಿದೆ.

ಬಾಬು:ಜಿಪಿಆರ್

# ವ್ಯಕ್ತಿ ವಿಕಸನ ಹಾಗೂ ಸಾಹಸ ಶಿಬಿರ

ಬೆಂಗಳೂರು, ಏಪ್ರಿಲ್ 7 (ಕರ್ನಾಟಕ ವಾರ್ತೆ)

ಲಾಲ್ ಬಹದ್ದೂರ್ ಸೆಂಟರ್ ಆಫ್ ಎಕ್ಸ್‌ಲೆನ್ಸ್ ಇನ್ ಸ್ಪೋರ್ಟ್ಸ್ ಮತ್ತು ಅಡ್ವೆಂಚರ್ ಅಕಾಡೆಮಿಯು ಮೇ 1 ರಿಂದ 5 ರವರೆಗೆ ಶಾಲಾ ವಿದ್ಯಾರ್ಥಿಗಳಿಗೆ ವ್ಯಕ್ತಿ ವಿಕಸನ ಶಿಬಿರ ಹಾಗೂ ಸಾಹಸ ಶಿಬಿರವನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ಬೆಸೆಂಟ್ ಪಾರ್ಕ್‌ನ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನಲ್ಲಿ ನಡೆಸಲಿದೆ.

ಈ ಶಿಬಿರದಲ್ಲಿ ಆಸಕ್ತ ವಿದ್ಯಾರ್ಥಿಗಳು ಪಾಲ್ಗೊಳ್ಳಬಹುದಾಗಿದೆ. ಹೆಚ್ಚಿನ ವಿವರಗಳಿಗೆ ಅಕಾಡೆಮಿಯ ದೂರವಾಣಿ ಸಂಖ್ಯೆ 080 – 22236468 ಅಥವಾ ಮೊಬೈಲ್ ಸಂಖ್ಯೆ 09341822000 ಸಂಪರ್ಕಿಸಲು ಕೋರಿದೆ.

ಬಾಬು:ಜಿಪಿಆರ್

# ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಎಲ್ಲಾ ರೀತಿಯ ಸೌಲಭ್ಯ :

– ಸಚಿವ ಯು.ಟಿ. ಖಾದರ್

ಬೆಂಗಳೂರು, ಏಪ್ರಿಲ್ 7 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ವಾಸಿಸುವ ಪ್ರತಿಯೊಬ್ಬರಿಗೆ ಆರೋಗ್ಯ ಸೌಲಭ್ಯ ಒದಗಿಸುವ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣ ಮಾಡುವ ಗುರಿಹೊಂದಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು. ಟಿ. ಖಾದರ್ ಅವರು ತಿಳಿಸಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಇಂದು ಏರ್ಪಡಿಸಿದ್ದ ವಿಶ್ವ ಆರೋಗ್ಯ ದಿನ 2016 ಕಾರ್ಯಕ್ರಮವನ್ನು ಉದ್ಘಾಟಿಸಿ ಮೂರನೆ ಹಂತದ ಇಂದ್ರ ಧನುಷ್ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಸಚಿವರು ಪ್ರತಿವರ್ಷ ವಿಶ್ವ ಆರೋಗ್ಯ ದಿನದಂದು ಒಂದು ನಿರ್ದಿಷ್ಟ ಆರೋಗ್ಯ ಸಮಸ್ಯೆಯನ್ನು ಗುರುತಿಸಿ ನಿಯಂತ್ರಿಸಲು ಗಮನಹರಿಸಲಾಗುತ್ತಿದ್ದು ಈ ವರ್ಷ "ಮಧುಮೇಹದ ಏರಿಕೆಯನ್ನು ನಿಲ್ಲಿಸಿ ಮತ್ತು ಸೋಲಿಸಿ" ಎಂಬ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು ಮಧುಮೇಹ ರೋಗ ನಿಯಂತ್ರಣಕ್ಕೆ ಇಲಾಖೆ ವತಿಯಿಂದ ಎಲ್ಲಾ ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದರು.

ಇಂದ್ರಧನುಷ್ ಅಭಿಯಾನದ ಮೂರನೇ ಹಂತದ ಲಸಿಕಾ ಅಭಿಯಾನಕ್ಕೆ ಇಂದು ಚಾಲನೆ ನೀಡಿದ್ದು ಪ್ರಮುಖವಾಗಿ ಆರು ಜಿಲ್ಲೆಗಳಲ್ಲಿ ಪೋಲಿಯೋ ನಿರ್ಮಾಲನೆಯ ಕಡೆಯ ತಂತ್ರವಾಗಿ ಐ.ಪಿ.ವಿ. (I.P.V.) ಲಸಿಕೆಯನ್ನು ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ನೀಡಲಾಗುವುದು ಎಂದ ಆರೋಗ್ಯ ಸಚಿವರು ಮಿತ ಆಹಾರ ಸೇವನೆ ಹಾಗೂ ನಿಯಮಿತ ದೈಹಿಕ ಚಟುವಟಿಕೆಗಳಿಂದ ಮಧುಮೇಹ ರೋಗವನ್ನು ನಿಯಂತ್ರಿಸಲು ಸಾಧ್ಯವಿದೆ ಎಂದರು.

ಬೆಂಗಳೂರಿನಲ್ಲಿರುವ ಮಧುಮೇಹ ಸಂಸ್ಥೆಗೆ ಸ್ವಂತ ಕಟ್ಟಡ ಹಾಗೂ ಒಳಗೋಗಿಗಳ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಅಧ್ಯಕ್ಷತೆ ವಹಿಸಿ ಮಾತನಾಡಿದ ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್ ಅವರು ಈ ಕಾರ್ಯಕ್ಕೆ 67 ಕೋಟಿ ರೂ. ಖರ್ಚಾಗಲಿದ್ದು, ಪ್ರಸಕ್ತ ಸಾಲಿನಲ್ಲೇ ಈ ಕೆಲಸ ಪ್ರಾರಂಭಿಸಲಾಗುವುದು ಎಂದರು.

ಸಾರಿಗೆ ಸಚಿವರಾದ ರಾಮಲಿಂಗಾರೆಡ್ಡಿ ಅವರು ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮಧುಮೇಹ ನಿಯಂತ್ರಣಕ್ಕೆ ಕೆಳಹಂತದಿಂದ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಸಂಸದೀಯ ಕಾರ್ಯದರ್ಶಿ ಡಾ. ಉಮೇಶ್ ಜಿ. ಜಾದವ್ ಅವರು ತಿಳಿಸಿದರು. ಮಧುಮೇಹ ರೋಗದ ಬಗ್ಗೆ ಡಾ. ವೀರಣ್ಣ ಗೌಡ ಅವರು ಉಪನ್ಯಾಸ ನೀಡಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಲಕ್ಷ್ಮೀನಾರಾಯಣ, ರಾಷ್ಟ್ರೀಯ ಅರೋಗ್ಯ ಅಭಿಯಾನ ನಿರ್ದೇಶಕಿ ಶ್ರೀಮತಿ ಸೌಜನ್ಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನಿರ್ದೇಶಕಿ ಡಾ. ವಿಮಲಾ ಆರ್. ಪಾಟೀಲ್ ಹಾಗೂ ಹಿರಿಯ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಬಾಬು:ಜಿಪಿಆರ್

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು, ಏಪ್ರಿಲ್ 7 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:10-04-2016ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ **"ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ ಶ್ರೀ ಎಂ. ನಾಗಭೂಷಣ ಮತ್ತು ತಂಡ, ಮರಿಯಪ್ಪನಪಾಳ್ಯ ಬೆಂಗಳೂರು ರವರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ **"ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ ಶ್ರೀ ಧರ್ಮಪ್ಪ ನಾಯ್ಕ ಮತ್ತು ತಂಡ, ಹಾಸನರವರಿಂದ ರಂಗಗೀತೆಗಳು ಮತ್ತು ಜಾನಪದಗೀತೆಗಳ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
3. ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- **ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಶ್ರೀನಿಧಿ ಕೊಟ್ಟೂರ ಬಿ. ಆರ್. ರವರಿಂದ ಕರ್ನಾಟಕ ಸಂಗೀತ ಮತ್ತು ಸುಗಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 08.00 ಗಂಟೆಯಿಂದ 09.00 ಗಂಟೆಯವರೆಗೆ ವಾಣಿ ಸ್ಕೂಲ್, ಮಾಗಡಿ ರಸ್ತೆ ಬೆಂಗಳೂರು ರವರಿಂದ ದೇಶಭಕ್ತಿ ಗೀತೆಗಳ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

### II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- **ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 10.00 ಗಂಟೆಯವರೆಗೆ ಯೋಗ ಪ್ರಾಣ ವಿದ್ಯಾ ಸಂಸ್ಥೆಯ Soham Healing Center, ಆರ್.ಟಿ. ನಗರ ಬೆಂಗಳೂರು ರವರ ವತಿಯಿಂದ ಪ್ರಾಣ ಚಿಕಿತ್ಸೆ ನೀಡುವ ಕಾರ್ಯಕ್ರಮವನ್ನು ಉಚಿತವಾಗಿ ಏರ್ಪಡಿಸಲಾಗಿದೆ.**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಮತ್ತು ಸಂಜೆ 5.00 ಗಂಟೆಯಿಂದ 6.00 ಗಂಟೆಯವರೆಗೆ ಸಾಜಿ ಮ್ಯಾಥ್ಯೂ, ಬೆಂಗಳೂರು ರವರಿಂದ ಪರಿಸರ, ಶಿಕ್ಷಣದ ಮಹತ್ವ ಇತ್ಯಾದಿ ವಿಷಯಗಳ ಕುರಿತು ನೀತಿ ಪಾಠವನ್ನು ಕಥೆಯ ಮೂಲಕ ಮಕ್ಕಳಿಗೆ ಹೇಳುವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ವಿದ್ಯಾರಣ್ಯ ಸಂಸ್ಥೆಯು ನಡೆಸುತ್ತಿರುವ ಉದ್ಯೋಗಸ್ಥ ಮಹಿಳೆಯರು ತಯಾರಿಸಿದ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಬಾಬು/ಕೆಎಂ